ಸಾಕ್ಷಿದಾರನನ್ನು ಕರೆಸಿ ಪ್ರಮಾಣೀಕರಿಸಲಾಯಿತು. ಪ್ರ.ಮಾ.ದಿಃ 17-12-2021.

**ಮುಂದುವರಿದ ಮುಖ್ಯ ವಿಚಾರಣೆ – ವಾದಿ ಪರಃ ಸಿ.ಪಿ.ಡಿ. ವಕೀಲರಿಂದಃ**

ದಾವೆಗೆ ಸಂಬಂಧಿಸಿದಂತೆ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು, ಅವುಗಳನ್ನು ನೋಡಿದರೆ ಗುರುತಿಸುತ್ತೇನೆ.

ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಎರಡು ಪಂಚಾಯತ ಆಸ್ತಿ ದೃಢೀಕರಣ ಪತ್ರಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-1 ಮತ್ತು ನಿಪಿ-2 ಎಂದು, ಪ್ರತಿವಾದಿಗೆ ನಮ್ಮ ವಕೀಲರ ಮೂಲಕ ನೀಡಿದ ನೋಟಿಸ್ಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-3 ಎಂದು, ಪ್ರತಿವಾದಿಯು ತನ್ನ ವಕೀಲರ ಮೂಲಕ ನನ್ನ ವಕೀಲರಿಗೆ ನೀಡಿದ ನೋಟಿಸ್ಸಿನ ಮೂಲ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, ದಾವಾ ಆಸ್ತಿಗಳಿಗೆ ಸಂಬಂಧಪಟ್ಟಂತೆ 4 ಭಾವಚಿತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ -5 ರಿಂದ ನಿಪಿ-8 ಎಂದು, ಒಂದು ಸಿ.ಡಿ. ಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-9 ಎಂದು ಗುರುತಿಸಲಾಯಿತು.

ಮುಂದುವರಿದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೆ ಕೆ ಸರಿ ಅದೆ.

ಸಹಿ/-
ದಿವಾಣಿ ನ್ಯಾಯಾಧೀಶರು,
ಬ್ಯಾಡಗಿ.